Akashvani: Bangalore
Regional Bulletin In Kannada
14.08.2025 : 14.30hrs

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

14.08.2025 : 14.30hrs

*******

**ಮುಖ್ಯಾಂಶಗಳು**

- ರಾಜ್ಯದಲ್ಲಿ ಶೀಘ್ರವೇ ನಾಗರಿಕ ಸೇವಾ ಮಂಡಳಿ ರಚನೆ; ಮೇಲ್ಮನೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟನೆ
- ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ೫೫ ಸಾವಿರ ಸಿಬ್ಬಂದಿ ವರ್ಗಾವಣೆ; ಸಚಿವ ದಿನೇಶ್ ಗುಂಡೂರಾವ್
- ನಟ ದರ್ಶನ್ ಸೇರಿ ೭ ಮಂದಿ ಆರೋಪಿಗಳ ಜಾಮೀನು ರದ್ದುಗೊಳಿಸಿದ ಸರ್ವೋಚ್ಚ ನ್ಯಾಯಾಲಯ
- ರಾಜ್ಯಾದ್ಯಂತ ಮೂರನೇ ದಿನಕ್ಕೆ ಕಾಲಿಟ್ಟ ಆಶಾ ಕಾರ್ಯಕರ್ತೆಯರ ಪ್ರತಿಭಟನೆ
- ರಾಜ್ಯದೆಲ್ಲೆಡೆ ಮನೆ ಮನೆಯಲ್ಲೂ ತ್ರಿವರ್ಣ ಧ್ವಜ ಅಭಿಯಾನ; ಮೈಸೂರಿನಲ್ಲಿ ಗಜಪಡೆಗಳಿಂದ ದೇಶ ಪ್ರೇಮ

********

ರಾಜ್ಯದಲ್ಲಿ ನಾಗರಿಕ ಸೇವಾ ಮಂಡಳಿ ಪ್ರಕ್ರಿಯೆ ಪ್ರಾರಂಭವಾಗಿದ್ದು, ಆದಷ್ಟು ಬೇಗ ಅಂತಿಮ ತೀರ್ಮಾನ ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಸಿದ್ದ ರಾಮಯ್ಯ ಮೇಲ್ಮನೆಯಲ್ಲಿ ತಿಳಿಸಿದ್ದಾರೆ. ಪ್ರಶ್ನೋತ್ತರ ಕಲಾಪದಲ್ಲಿ ಬಿಜೆಪಿಯ ಪ್ರತಾಪ್ ಸಿಂಹ ನಾಯಕ್ ಅವರ ಪ್ರಶ್ನೆಗೆ ಉತ್ತರ ನೀಡಿದ ಅವರು, ನಾಗರಿಕ ಸೇವಾ ಮಂಡಳಿ ರಚನೆ ಸಂಬಂಧ ಅಧ್ಯಯನ ನಡೆಸಿ ವರದಿ ನೀಡಲು ೨೦೨೪ ರ ಸೆಪ್ಟೆಂಬರ್‌ನಲ್ಲಿ ಸಚಿವ ಸಂಪುಟದ ಉಪಸಮಿತಿ ರಚಿಸಲಾಗಿತ್ತು. ಉಪಸಮಿತಿ ಈಗಾಗಲೇ ತನ್ನ ವರದಿಯನ್ನು ನೀಡಿದೆ ಎಂದು ಹೇಳಿದರು. ಸಮಿತಿಯ ಶಿಫಾರಸ್ಸುಗಳ ಬಗ್ಗೆ ಮುಂದಿನ ಸಚಿವ ಸಂಪುಟದಲ್ಲಿ ಚರ್ಚಿಸಿ ಅಂತಿಮ ತೀರ್ಮಾನ ಮಾಡಲಾಗುವುದು ಎಂದು ಸ್ಪಷ್ಟಪಡಿಸಿದರು. ಇದಕ್ಕೂ ಮುನ್ನ ಪ್ರಶ್ನೆ ಕೇಳಿದ ಪ್ರತಾಪ್ ಸಿಂಹ

ನಾಯಕ್, ನೌಕರರ ವರ್ಗಾವಣೆಯಲ್ಲಿ ಪಾರದರ್ಶಕತೆ ಕಾಯ್ದುಕೊಳ್ಳಲು ಮಂಡಳಿ ರಚನೆ ಮಾಡುವುದು ಅತ್ಯಗತ್ಯ ವಾಗಿದೆ ಎಂದು ಒತ್ತಾಯಿಸಿದರು.

********

ರಾಜ್ಯದಲ್ಲಿ ಕಾನೂನು ಮತ್ತು ಸುವ್ಯವಸ್ಥೆ ಕಾಪಾಡಲು ಸರ್ಕಾರ ಬದ್ಧವಾಗಿದ್ದು, ಈ ನಿಟ್ಟಿನಲ್ಲಿ ಹಲವು ಕಠಿಣ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ವಿಧಾನ ಪರಿಷತ್‌ನಲ್ಲಿ ಇಂದು ತಿಳಿಸಿದ್ದಾರೆ. ಪ್ರಶ್ನೋತ್ತರ ಕಲಾಪದಲ್ಲಿ ಬಿಜೆಪಿಯ ಕಿಶೋರ್ ಕುಮಾರ್ ಪುತ್ತೂರ್ ಅವರ ಪ್ರಶ್ನೆಗೆ ಉತ್ತರ ನೀಡಿದ ಸಚಿವರು, ಕಾನೂನು ಮತ್ತು ಸುವ್ಯವಸ್ಥೆ ಕಾಪಾಡುವುದು ಗೃಹ ಸಚಿವರಾಗಿ ನನ್ನ ಕರ್ತವ್ಯವಾಗಿದೆ ಎಂದು ಹೇಳಿದ್ದಾರೆ. ರಾಜ್ಯದಲ್ಲಿ ಶಾಂತಿ ನೆಲೆಸಿರುವ ಹಿನ್ನೆಲೆಯಲ್ಲಿ ದೇಶ- ವಿದೇಶಗಳ ಉದ್ದಿಮೆ ದಾರರು  ಬಂಡವಾಳ ಹೂಡಿಕೆಗೆ ಆಸಕ್ತಿ ತೋರುತ್ತಿದ್ದಾರೆ. ದಕ್ಷಿಣ ಕನ್ನಡ, ಉಡುಪಿ ಮತ್ತು ಶಿವಮೊಗ್ಗ ಜಿಲ್ಲೆಗಳಲ್ಲಿ ಶಾಂತಿ ಕಾಪಾಡಲು ವಿಶೇಷ ಕಾರ್ಯ ಪಡೆ ರಚಿಸಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

********

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಮೊದಲ ಬಾರಿಗೆ ಪಾರದರ್ಶಕವಾಗಿ ಕೌನ್ಸೆಲಿಂಗ್ ನಡೆಸಿ, ೫೫ ಸಾವಿರ ಸಿಬ್ಬಂದಿ ವರ್ಗಾವಣೆ ಮಾಡಲಾಗಿದೆ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ವಿಧಾನಸಭೆಗೆ ಇಂದು ತಿಳಿಸಿದ್ದಾರೆ. ಎಲ್ಲಾ ತಾಲೂಕು ಆಸ್ಪತ್ರೆಗಳಲ್ಲಿ ತಜ್ಞ ವೈದ್ಯರ ಸಂಖ್ಯೆಯನ್ನು ದುಪ್ಪಟ್ಟು ಮಾಡಲಾಗುವುದು.ಇಬ್ಬರು ಅರಿವಳಿಕೆ, ಪ್ರಯೋಗ ತಜ್ಞರು, ಇಬ್ಬರು ಮಕ್ಕಳ ವೈದ್ಯರನ್ನು ಒದಗಿಸಲಾಗುವುದು ಎಂದು ಸದನಕ್ಕೆ ಮಾಹಿತಿ ನೀಡಿದ್ದಾರೆ.

ಪ್ರಸಕ್ತ ಸಾಲಿನಲ್ಲಿ ೩೪ ಸಾವಿರದ ೧೭ ಪ್ರಾಥಮಿಕ ಹಾಗೂ ೯ ಸಾವಿರದ ೪೯೯ ಪ್ರೌಢಶಾಲಾ ಅತಿಥಿ ಶಿಕ್ಷಕರನ್ನು ನೇಮಕ ಮಾಡಿಕೊಳ್ಳಲಾಗಿದೆ ಎಂದು ಉನ್ನತ ಶಿಕ್ಷಣ ಸಚಿವ ಎಂ.ಸಿ. ಸುಧಾಕರ್ ವಿಧಾನಸಭೆಗೆ ತಿಳಿಸಿದ್ದಾರೆ.   ಪ್ರಶ್ನೋತ್ತರ ವೇಳೆಯಲ್ಲಿ ಬಿಜೆಪಿ ಶಾಸಕ ಕೆ. ಗೋಪಾಲಯ್ಯ ಪ್ರಶ್ನೆಗೆ ಉತ್ತರಿಸಿದ ಅವರು, ಶಿಕ್ಷಕರ ವರ್ಗಾವಣೆ ಕೌನ್ಸೆಲಿಂಗ್ ಮುಗಿದ ಬಳಿಕ ಶಿಕ್ಷಕರ ಮರು ಹೊಂದಾಣಿಕೆ ಮಾಡಲಾಗುವುದು ಎಂದು ಹೇಳಿದ್ದಾರೆ. ರಾಜ್ಯದಲ್ಲಿ ೫೦ ಸಾವಿರ

ಶಿಕ್ಷಕರ ಕೊರತೆ ಇದ್ದು, ಅತಿಥಿ ಶಿಕ್ಷಕರನ್ನು ನೇಮಕ ಮಾಡಿಕೊಳ್ಳಲಾಗುವುದು ಎಂದು ತಿಳಿಸಿದ್ದಾರೆ. ಹಾಸನದ ಬೇಲೂರು ತಾಲೂಕಿನ ಬಿಕ್ಕೋಡು ಗ್ರಾಮದಲ್ಲಿ ಆನೆ ಕಾರ್ಯಪಡೆ ಕ್ಯಾಂಪ್ ನಿರ್ಮಾಣ ಮಾಡಲಾಗುತ್ತಿದೆ. ಕಳಪೆ ಕಾಮಗಾರಿ ಆರೋಪದ ಬಗ್ಗೆ ತನಿಖೆ ನಡೆಸಲಾಗುತ್ತಿದೆ ಎಂದು ಅರಣ್ಯ ಸಚಿವ ಈಶ್ವರ್ ಬಿ. ಖಂಡ್ರೆ ಕೆಳಮನೆಯಲ್ಲಿ ತಿಳಿಸಿದ್ದಾರೆ.

********

ರೇಣುಕಾಸ್ವಾಮಿ ಹತ್ಯೆ ಪ್ರಕರಣದಲ್ಲಿ ಸರ್ವೋಚ್ಚ ನ್ಯಾಯಾಲಯ ನಟ ದರ್ಶನ್ ಸೇರಿದಂತೆ ಇತರೆ ೭ ಮಂದಿ ಆರೋಪಿಗಳ ಜಾಮೀನು ರದ್ದುಗೊಳಿಸಿ ತೀರ್ಪು ನೀಡಿದೆ. ನ್ಯಾಯಮೂರ್ತಿಗಳಾದ ಆರ್. ಮಹದೇವನ್ ಮತ್ತು ಜೆ.ಬಿ. ಪಾರ್ದಿವಾಲ ಅವರನ್ನೊಳಗೊಂಡ ಪೀಠವು ಪ್ರಕರಣದಲ್ಲಿ ಹೈಕೋರ್ಟ್ ನಿರ್ಧಾರ ದೋಷಪೂರಿತವಾಗಿದೆ ಎಂದು ತಿಳಿಸಿದೆ. ಎಲ್ಲಾ ಆರೋಪಿಗಳು ಕೂಡಲೇ ಶರಣಾಗಬೇಕು. ಇಲ್ಲವಾದರೆ ಕೂಡಲೇ ಆರೋಪಿಗಳನ್ನು ಬಂಧಿಸುವಂತೆ ಪೊಲೀಸರಿಗೆ ಸೂಚಿಸಿದೆ. ಇದೇ ವೇಳೆ ದರ್ಶನ್‌ಗೆ ಜೈಲಿನಲ್ಲಿ ರಾಜಾತಿಥ್ಯ ನೀಡದಂತೆ ಜೈಲಾಧಿಕಾರಿಗಳಿಗೆ ನ್ಯಾಯಾಲಯ ನಿರ್ದೇಶನ ನೀಡಿದೆ. ಸಾಕ್ಷಿಗಳ ವಿಚಾರಣೆಯನ್ನು ತ್ವರಿತವಾಗಿ ನಡೆಸಬೇಕು. ಕಾನೂನಿನ ಮುಂದೆ ಎಲ್ಲರೂ ಸಮಾನರು ಎಂದು ನ್ಯಾಯಾಲಯ ಒತ್ತಿ ಹೇಳಿದೆ. ತೀರ್ಪಿನ ಪ್ರತಿಯನ್ನು ಎಲ್ಲಾ ಹೈಕೋರ್ಟ್‌ಗಳು ಮತ್ತು ರಾಜ್ಯ ಸರ್ಕಾರಗಳಿಗೆ ನೀಡುವಂತೆ ರಿಜಿಸ್ಟ್ರಾರ್‌ಗೆ ನ್ಯಾಯಾಲಯ ಸೂಚಿಸಿದೆ. ಈ ನಡುವೆ ಆರೋಪಿ ಪವಿತ್ರಾ ಗೌಡ ಅವರನ್ನು ಪೊಲೀಸರು ಬಂಧಿಸಿದ್ದಾರೆ.

********

ರಾಜ್ಯಾದ್ಯಂತ ಆಶಾಕಾರ್ಯಕರ್ತೆಯ ಪ್ರತಿಭಟನೆ ಮೂರನೇ ದಿನಕ್ಕೆ ಕಾಲಿಟ್ಟಿದೆ. ಬೆಂಗಳೂರಿನ ಫ್ರೀಡಂಪಾರ್ಕ್‌ನಲ್ಲಿ ಆಶಾ ಕಾರ್ಯಕರ್ತೆಯರು ಕಳೆದ ಮೂರು ದಿನಗಳಿಂದ ಅಹೋರಾತ್ರಿ ಧರಣಿ ನಡೆಸುತ್ತಿದ್ದಾರೆ. ಕಳೆದ ಜನವರಿಯಲ್ಲಿ ಏಪ್ರಿಲ್ ತಿಂಗಳಿನಿಂದ ಮಾಸಿಕ ವೇತನ ೧೦ ಸಾವಿರ ನಿಗದಿಪಡಿಸುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಭರವಸೆ ನೀಡಿದ್ದರು. ಈವರೆಗೂ ಭರವಸೆ ಈಡೇರಿಸಿಲ್ಲ ಎಂದು ಆಶಾ ಕಾರ್ಯಕರ್ತೆಯರು ದೂರಿದ್ದಾರೆ. ಆಯವ್ಯಯದಲ್ಲಿ ಅಂಗನವಾಡಿ

ಹಾಗೂ ಬಿಸಿಯೂಟ ಕಾರ್ಯಕರ್ತೆಯರಿಗೆ ಒಂದು ಸಾವಿರ ರೂಪಾಯಿ ವೇತನ ಹೆಚ್ಚಳ ಮಾಡಲಾಗಿದೆ. ಇಲ್ಲೂ ಆಶಾ ಕಾರ್ಯಕರ್ತೆಯರನ್ನು ನಿರ್ಲಕ್ಷಿಸಲಾಗಿದೆ ಎಂದು ಆಶಾ ಕಾರ್ಯಕರ್ತೆ ಫರ್ಹಾನಾ ಆರೋಪಿಸಿದ್ದಾರೆ.

********

ಮೈಸೂರಿನಲ್ಲಿಂದು ದಸರಾ ಗಜಪಡೆ ಕ್ಯಾಪ್ಟನ್ ಅಭಿಮನ್ಯು ನೇತೃತ್ವದ ಆನೆಗಳು, ಸೊಂಡಿಲಿನ ಮೂಲಕ ತ್ರಿವರ್ಣ ಧ್ವಜ ಹಿಡಿದು, ನಗರವನ್ನು ಸ್ವಚ್ಛತೆಯಾಗಿ ಇಡುವಂತೆ ಸಂದೇಶ ಸಾರಿದವು. ಮಹಾನಗರ ಪಾಲಿಕೆ ವತಿಯಿಂದ ಆಯೋಜಿಸಿದ್ದ ಮನೆ ಮನೆಯಲ್ಲೂ ತ್ರಿವರ್ಣ, ಮನೆ ಮನೆಯಲ್ಲೂ ಸ್ವಚ್ಛತೆ ಕಾರ್ಯಕ್ರಮ ಅಂಗವಾಗಿ ದಸರಾ ಗಜಪಡೆ ಕ್ಯಾಪ್ಟನ್ ಅಭಿಮನ್ಯು, ಪ್ರಶಾಂತ, ಏಕಲವ್ಯ, ಧನಂಜಯ, ಕಂಜನ್, ಕಾವೇರಿ, ಲಕ್ಷ್ಮಿ, ಮಹೇಂದ್ರ, ಭೀಮ ಆನೆಗಳು ಸೊಂಡಿಲಿನ ಮೂಲಕ ತ್ರಿವರ್ಣ ಧ್ವಜ ಹಿಡಿದು ಸಾಗಿದವು. ಮಾವುತರು, ಆನೆಗಳ ಮೇಲೆ ಧ್ವಜ ಹಿಡಿದು, ಅರಮನೆ ಕೋಟೆ ಆಂಜನೇಯ ಸ್ವಾಮಿ ದೇವಸ್ಥಾನ ಮುಂಭಾಗದಿಂದ  ಕೆ.ಆರ್.ಆಸ್ಪತ್ರೆ ವೃತ್ತದವರೆಗೆ ಸಾಗಿದರು. ನಗರ ಪಾಲಿಕೆ ಸಿಬ್ಬಂದಿ ಮನೆ ಮನೆಯಲ್ಲೂ ತ್ರಿವರ್ಣ, ಮನೆ ಮನೆಯಲ್ಲೂ ಸ್ವಚ್ಛತೆ ಎಂದು ಘೋಷಣೆ ಕೂಗುತ್ತ, ನಗರವನ್ನು ಸ್ವಚ್ಛವಾಗಿ ಇಡಲು ಸಾರ್ವಜನಿಕರು ಕೈ ಜೋಡಿಸಿ ಎಂದು ಮನವಿ ಮಾಡಿದರು. ಈ ವೇಳೆ ಸುದ್ದಿಗಾರರೊಂದಿಗೆ ಮಾತನಾಡಿದ ನಗರ ಪಾಲಿಕೆ ಆಯುಕ್ತ ತನ್ವೀರ್ ಶೇಕ್ ಆಸೀಫ್ ಅವರು, ಮೈಸೂರು ನಗರ ಪಾಲಿಕೆ ವ್ಯಾಪ್ತಿಯ ಸಾರ್ವಜನಿಕರು ನಗರವನ್ನು ಸ್ವಚ್ಛವಾಗಿಡಲು ಕೈ ಜೋಡಿಸಬೇಕು. ಮುಂದಿನ ಬಾರಿ ಮೈಸೂರು ಸ್ವಚ್ಛತೆಯಲ್ಲಿ ನಂಬರ್ ಒನ್ ಸ್ಥಾನಗಳಿಸಲು ಸಹಕಾರ ನೀಡಬೇಕು ಎಂದು ತಿಳಿಸಿದರು.

********

ಹೊಸಪೇಟೆ ನಗರಸಭೆಯ  ವತಿಯಿಂದ 'ಹರ್ ಘರ್ ತಿರಂಗ' ಅಭಿಯಾನ ಇಂದು  ನಡೆಯಿತು. ಅಭಿಯಾನದ ಬೈಕ್ ರ್‍ಯಾಲಿಗೆ  ಹೊಸಪೇಟೆ ನಗರಸಭೆ ಅಧ್ಯಕ್ಷರಾದ ಎನ್.ರೂಪೇಶ್ ಕುಮಾರ್ ಚಾಲನೆ ನೀಡಿದರು. ಬೈಕ್ ರ್‍ಯಾಲಿ ನಗರಸಭೆ ಆವರಣದಿಂದ ಆರಂಭವಾಗಿ  ನಗರದ ಪ್ರಮುಖ ಬೀದಿಗಳಲ್ಲಿ ಸಂಚರಿಸಿ, ದೇಶಭಕ್ತಿ ಮೂಡಿಸಿತು. ರ್‍ಯಾಲಿಯಲ್ಲಿ ಭಾಗವಹಿಸಿದ್ದ ಸದಸ್ಯರು ಕೈಯಲ್ಲಿ

ರಾಷ್ಟ್ರಧ್ವಜ ಹಿಡಿದು ವಂದೇ ಮಾತರಂ, ಭಾರತ ಮಾತಾ ಕೀ ಜೈ ಎಂಬ ಘೋಷಣೆಗಳನ್ನು ಕೂಗುತ್ತಾ ದೇಶಭಕ್ತಿ ಮೆರೆದರು. ಕೇಂದ್ರ ಸಚಿವಾಲಯದ ರಾಷ್ಟ್ರೀಯ ಆಧುನಿಕ ಕಲಾ ಗ್ಯಾಲರಿ ಬೆಂಗಳೂರಿನಲ್ಲಿಂದು ಮರೆತು ಹೋದ ಸ್ವಾತಂತ್ರ್ಯ ವೀರರು ಮತ್ತು ಯೋಧರ ಕತೆಗಳು ಎಂಬ ಕಾರ್ಯಕ್ರಮ ಆಯೋಜಿಸಿದೆ. ಸಾರ್ವಜನಿಕರು ಭಾಗವಹಿಸುವಂತೆ ಮನವಿ ಮಾಡಿದೆ.

********

ಬಾಗಲಕೋಟೆ ಜಿಲ್ಲೆಯಲ್ಲಿ ಪ್ರತಿಯೊಬ್ಬರಿಗೂ ಅಕ್ಷರ ಸಾಕ್ಷರತೆ ಜೊತೆಗೆ ಆರ್ಥಿಕ ಸಾಕ್ಷರತೆ ಕುರಿತು ಅರಿವು ಮೂಡಿಸಲಾಗುತ್ತಿದೆ ಎಂದು ಲೀಡ್ ಬ್ಯಾಂಕ್ ಮ್ಯಾನೇಜರ್ ರಾಜಕುಮಾರ ಹೂಗಾರ್ ತಿಳಿಸಿದ್ದಾರೆ. ಜಿಲ್ಲೆಯ ಆಡಗಲ್, ಕಟಗೇರಿ ಸೇರಿದಂತೆ ೭೫ ಗ್ರಾಮ ಪಂಚಾಯಿತಿಗಳಲ್ಲಿ ಪ್ರಧಾನ ಮಂತ್ರಿ ಸುರಕ್ಷಾ ವಿಮಾ ಯೋಜನೆ, ಪ್ರಧಾನ ಮಂತ್ರಿ ಜೀವನ ಜ್ಯೋತಿ ವಿಮಾ ಯೋಜನೆ ಹಾಗೂ ಅಟಲ್ ಪೆನ್ಷನ್ ಯೋಜನೆಯ ಕುರಿತು ಗ್ರಾಮೀಣ ಜನತೆಗೆ ಸುದೀರ್ಘವಾಗಿ ಅರಿವು ಮೂಡಿಸಲಾಗಿದೆ. ರೈತರಿಗೆ ಸರ್ಕಾರದ ಸೌಲಭ್ಯಗಳ ಜೊತೆಗೆ ಜೀವನದ ಗುಣಮಟ್ಟ ಉತ್ತಮಗೊಳಿಸಲು ಈ ಕಾರ್ಯಕ್ರಮಗಳು ಪ್ರಮುಖವಾಗಿವೆ ಎಂದು ತಿಳಿಸಿದ್ದಾರೆ.

********

ಕಾಂಗ್ರೆಸ್ ಸರಕಾರವು ಒಳ ಮೀಸಲಾತಿ ವಿಷಯದಲ್ಲಿ ವಿಳಂಬ ನೀತಿ ಅನುಸರಿಸಿ ಪರಿಶಿಷ್ಟ ಸಮುದಾಯಗಳನ್ನು ವಂಚಿಸುತ್ತಿದೆ ಎಂದು ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಆರೋಪಿಸಿದ್ದಾರೆ. ವಿಧಾನಸೌಧದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಾಗಮೋಹನ್‌ದಾಸ್ ಆಯೋಗ ರಚಿಸಿ ೫ ಗುಂಪು ಮಾಡಲಾಗಿದೆ. ಛಲವಾದಿ ಸಮುದಾಯದ ಕೆಲವು ಜಾತಿಗಳನ್ನು ಮಾದಿಗ ಸಮುದಾಯಕ್ಕೆ ಸೇರಿಸಿದ್ದಾರೆ. ಬಲಗೈ ಸಮುದಾಯಕ್ಕೆ ಸಂಪೂರ್ಣ ಅನ್ಯಾಯ ಮಾಡಲಾಗಿದೆ ಎಂದು ದೂರಿದ್ದಾರೆ.

********

ಪ್ರತಿ ೧೫ ದಿನಗಳಿಗೊಮ್ಮೆ ಶಾಲೆ ಮತ್ತು ಅಂಗನವಾಡಿಗಳ ಕುಡಿಯುವ ನೀರನ್ನು ಪರೀಕ್ಷೆಗೊಳಪಡಿಸಿ ತಪಾಸಣೆ ನಡೆಸುವಂತೆ ದಕ್ಷಿಣ ಕನ್ನಡ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ನರ್ವಾಡೆ ವಿನಾಯಕ್ ಕಾರ್ಬಾರಿ ಸೂಚಿಸಿದ್ದಾರೆ. ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜಿಲ್ಲಾ ನೀರು ಮತ್ತು ನೈರ್ಮಲ್ಯ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಜಿಲ್ಲೆಯಲ್ಲಿರುವ ಪ್ರತಿ ಅಂಗನವಾಡಿ ಮತ್ತು ಶಾಲೆಗಳ ಕುಡಿಯುವ ನೀರಿನ ಘಟಕವನ್ನು ಆದ್ಯತೆಯಲ್ಲಿ ತಪಾಸಣೆ ನಡೆಸಬೇಕು ಎಂದು ತಿಳಿಸಿದ್ದಾರೆ. ಮಹಿಳಾ ಮತ್ತು ಮಕ್ಕಳ ಇಲಾಖೆ ಉಪ ನಿರ್ದೇಶಕರು ಹಾಗೂ ಶಾಲಾ ಶಿಕ್ಷಣ ಇಲಾಖೆ ಉಪ ನಿರ್ದೇಶಕರು ಇದರ ಉಸ್ತುವಾರಿ ವಹಿಸಬೇಕು ಎಂದು ಹೇಳಿದ್ದಾರೆ.

********

ದಾವಣಗೆರೆ ಜಿಲ್ಲೆಯ ವಿವಿಧ ತಾಲ್ಲೂಕುಗಳಲ್ಲಿ ಖಾಲಿ ಇದ್ದ ಅಂಗನವಾಡಿ ಕಾರ್ಯಕರ್ತೆಯರು ಮತ್ತು ಸಹಾಯಕಿಯರ ಹುದ್ದೆಗಳ ನೇಮಕಾತಿಯ ತಾತ್ಕಾಲಿಕ ಆಯ್ಕೆಪಟ್ಟಿಯನ್ನು ಪ್ರಕಟಿಸಲಾಗಿದೆ ಎಂದು ಜಿಲ್ಲಾ ಮಹಿಳಾ ಮತ್ತು ಅಭಿವೃದ್ಧಿ ಇಲಾಖೆ ಸಹಾಯಕ ನಿರ್ದೇಶಕ ರಾಜಾನಾಯ್ಕ ಹೇಳಿದ್ದಾರೆ. ದಾವಣಗೆರೆ, ಜಗಳೂರು, ಹೊನ್ನಾಳಿ ಮತ್ತು ನ್ಯಾಮತಿ ಶಿಶು ಅಭಿವೃದ್ಧಿ ಯೋಜನಾ ವ್ಯಾಪ್ತಿಯಲ್ಲಿ ಖಾಲಿ ಇದ್ದ ೨೪ ಅಂಗನವಾಡಿ ಕಾರ್ಯಕರ್ತೆ ಮತ್ತು ೧೭೦ ಅಂಗನವಾಡಿ ಸಹಾಯಕಿಯರ ಹುದ್ದೆಗಳಿಗೆ ಈ ಆಯ್ಕೆಪಟ್ಟಿ ಪ್ರಕಟಿಸಲಾಗಿದೆ.

********

ಗ್ರಾಮೀಣ ಗ್ರಂಥಾಲಯಗಳು ಸಾರ್ವಜನಿಕರ ಜ್ಞಾನದಾಹವನ್ನು ನೀಗಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತವೆ ಎಂದು ಶಿರಹಟ್ಟಿ ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ರಾಮಣ್ಣ ದೊಡ್ಡಮನಿ ತಿಳಿಸಿದ್ದಾರೆ. ಗದಗ ಜಿಲ್ಲೆಯ ಶಿರಹಟ್ಟಿ ತಾಲೂಕಿನ ಮಾಚೇನಹಳ್ಳಿ ಗ್ರಾಮ ಪಂಚಾಯತ್ ವ್ಯಾಪ್ತಿಯ ಭಾವನೂರ ಗ್ರಾಮದಲ್ಲಿ ನೂತನ ಗ್ರಂಥಾಲಯ ಉದ್ಘಾಟಿಸಿ ಅವರು ಮಾತನಾಡಿದರು. ಗ್ರಾಮ ಪಂಚಾಯತ್ ಅಧ್ಯಕ್ಷೆ ಯಶೋದಾ ಗೋವಿಂದಗೌಡ

ಮಾತನಾಡಿ,ಗ್ರಾಮೀಣ ಪ್ರದೇಶದ ಪ್ರತಿಭೆ ಹೊರತರಲು ಈ ಡಿಜಿಟಲ್ ಗ್ರಂಥಾಲಯ ಬಹಳ ಉಪಯುಕ್ತವಾಗಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

****END****